# ವಾರ್ಡ್ ಹಂತದ ಸಮಿತಿ ಸಭೆ

## ವಾರ್ಡ್ ಸಂಖ್ಯೆ: 138

**06-03-2021** ರಂದು ಶನಿವಾರ ಬೆಳಿಗ್ಗೆ **10.30** ಘಂಟೆಗೆ ವಾರ್ಡ್ ಸಂಖ್ಯೆ: **138** ಛಲವಾಧಿ ಪಾಳ್ಯ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ ಕೆ. ಬಿ ತಾರಾನಾಥ್. ಸಹಾಯಕ ಕಾರ್ಯಪಾಲಕ ಅಭಿಯಂತರರು(ಕಾಟನ್ ಪೇಟೆ, ಉಪವಿಭಾಗ) ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ **138** ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕಯಲ್ಲಿ ಚುನಾಯಿತ ಪ್ರತಿನಿಧಿ ಅಧಿಕಾರ ಅವಧಿಯು ದಿನಾಂಕ: **10-09-2020**ಕ್ಕೆ ಮುಕ್ತಾಯವಾಗಿದ್ದು, ಬಿ.ಬಿ.ಎಂ.ಪಿ ಪ್ರತಿ ವಾರ್ಡ್‌ಗೆ ನೋಡೆಲ್ ಅಧಿಕಾರಿ ನೇಮಕಾತಿ ಮತ್ತು ವಾರ್ಡ್ ಹಂತದ ಸಮಿತಿ ರಚಿಸಿದ್ದು. ವಾರ್ಡ್‌ಗೆ ಸಂಬಂಧಿಸಿದಂತೆ ಸಾರ್ವಜನಿಕರ ಹಿತರಕ್ಷಣೆ ಗಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಗೆ ಅಹ್ವಾನಿಸಿದ ಮಾನ್ಯ ಅಧ್ಯಕ್ಷರಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಸಮಿತಿಯ ಕಾರ್ಯದರ್ಶಿ ಸಭೆಗೆ ಸ್ವಾಗತ ಕೋರುತ್ತಾ ಸಮಿತಿಯ ಅಧ್ಯಕ್ಷರಾದ ಶ್ರೀ ಕೆ. ಬಿ ತಾರಾನಾಥ್ ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು ಈ ಹಿಂದಿನ ಸಭೆಯ ನಡಾವಳಿಯ ನಿರ್ಣಯಗಳ ಬಗ್ಗೆ ಕೈಗೊಂಡ ಕಾರ್ಯವನ್ನು ಪರಿಶೀಲಿಸಲಾಯಿತು

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು

ಅಧ್ಯಕ್ಷರು: ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಸಭೆಯಲ್ಲಿ ಹಾಜರಾಗಿರುವ ಎಲ್ಲ ಸದಸ್ಯರುಗಳಿಗೆ ಸಾರ್ವಜನಿಕರಿಂದ ಬಂದ ದೂರುಗಳ ಬಗ್ಗೆ ಹಾಗೂ ವಾರ್ಡ್ ವ್ಯಾಪ್ತಿಯ ಕುಂದುಕೊರತೆಗಳ ಬಗ್ಗೆ ಸಭೆಯಲ್ಲಿ ವಿವರಣೆ ನೀಡುವಂತೆ ತಿಳಿಸಿದರು.

ವಾರ್ಡ್ ಕಮೀಟಿಯ ಸದಸ್ಯರು ಮತ್ತು ಇತರೆ ಅಧಿಕಾರಿಗಳು ವಾರ್ಡ್ -138ರ ವ್ಯಾಪ್ತಿಯಲ್ಲಿ ಬಂದಿರುವ ದೂರುಗಳ ಬಗ್ಗೆ ಪ್ರಸ್ತಾಪಿಸಿ ಕೆಲವು ದೂರುಗಳನ್ನು ಇತ್ಯರ್ಥ ಮಾಡಿದ್ದು ಉಳಿದಿರುವ ದೂರುಗಳ ವಿವರಣೆಯನ್ನು ಸಭೆಯಲ್ಲಿ ನೀಡಿದರು

.....2

ಸದರಿ ವಿಷಯದ ಬಗ್ಗೆ ಸಹಾಯಕ ಅಭಿಯಂತರರು ದೂರುಗಳನ್ನು ಪರಿಶೀಲಿಸಿ ತುರ್ತಾಗಿ ನಿರ್ವಹಿಸುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ವೈದ್ಯಾಧಿಕಾರಿಗಳ ಪ್ರತಿನಿದಿಗೆ ಎರಡನೇ ಹಂತದ ಕೋವಿಡ್-19ರ ಲಸಿಕೆ 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಮತ್ತು 45 ವರ್ಷ ಮೇಲ್ಪಟ್ಟ ಇತರೆ ಕಾಯಿಲೆ ಪೀಡಿತರಿಗೆ ಲಸಿಕೆ ನೀಡುತ್ತಿರುವ ಬಗ್ಗೆ ವಿವರಣೆಯನ್ನು ಕೋರಿದರು.

ವೈದ್ಯಾಧಿಕಾರಿಗಳ ಪ್ರತಿನಿಧಿಗಳು ಸದರಿ ವಿಷಯದ ಬಗ್ಗೆ ಸಭೆಯಲ್ಲಿ 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಮತ್ತು 45 ವರ್ಷ ಮೇಲ್ಪಟ್ಟ ಇತರೆ ಕಾಯಿಲೆ ಪೀಡಿತರಿಗೆ ಸರ್ಕಾರಿ ಅಸ್ಪತ್ರೆಗಳಲ್ಲಿ ಉಚಿತವಾಗಿ ಮತ್ತು ಇತರೆ ಗುರ್ತಿಸಿದ ಖಾಸಗಿ ಅಸ್ಪತ್ರೆಗಳಲ್ಲಿ ರೂ.250/- ಪಾವತಿಸಿ ಲಸಿಕೆ ಪಡೆಯಬಹುದೆಂದು ಸಭೆಯಲ್ಲಿ ತಿಳಿಸಿದರು ಹಾಗೂ ಸಂಬಂಧಿಸಿದ ಅಪ್‌ಗಳನ್ನು ಉಪಯೋಗಿಸಿಕೊಂಡು ನೊಂದಣಿ ಮಾಡಿ ಲಸಿಕೆ ಪಡೆಯಬಹುದೆಂದು ಸಭೆಯಲ್ಲಿ ವಿವರಿಸಿದೆರು.

ಅಧ್ಯಕ್ಷರು: ಬಿಡಬ್ಲೂಎಸ್‌ಎಸ್‌ಬಿ ಕಛೇರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಬಂದ ದೂರಿನ ಪುಸ್ತಕವನ್ನು ಪರಿಶೀಲಿಸಿದರು ಹಾಗೂ ದೂರುಗಳನ್ನು ಬಗೆ ಪರಿಹರಿಸಿರುವ ಬಗ್ಗೆ ಸಭೆಯಲ್ಲಿ ವಿವರಿಸುಂತೆ ಸೂಚಿಸಿದರು.

ಬಿಡಬ್ಲೂಎಸ್‌ಎಸ್‌ಬಿ ಆಧಿಕಾರಿಗಳು ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾರ್ಯವನ್ನು ನಿರ್ವಹಿಸುವುದಾಗಿ ತಿಳಿಸಿದರು.

ಅಧ್ಯಕ್ಷರು: ಬೆಸ್ಕಂ ಕಛೇರಿಗೆ ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾರ್ಯವನ್ನು ನಿರ್ವಹಿಸುವುದಾಗಿ ತಿಳಿಸಿದರು.

ಬೆಸ್ಕಂ ಆಧಿಕಾರಿಯವರು ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾರ್ಯವನ್ನು ನಿರ್ವಹಿಸುವುದಾಗಿ ತಿಳಿಸಿದರು.

---3

ಅಧ್ಯಕ್ಷರು: ಕಂದಾಯ ಪರಿವೀಕ್ಷಕರಿಗೆ 2020–21ನೇ ಸಾಲು ಮುಕ್ತಾಯ ಹಂತದಲ್ಲಿದ್ದು ಹೆಚ್ಚಿನ ಕಂದಾಯ ವಸೂಲು ಮಾಡುವಂತೆ ತಿಳಿಸಿದರು ಮತ್ತು 2021–22ನೇ ಸಾಲಿನಲ್ಲಿ ಏಪ್ರಿಲ್ ತಿಂಗಳಿನಲ್ಲಿ 5% ತೆರಿಗೆ ವಿನಾಯಿತಿಯ ಬಗ್ಗೆ ಸಭೆಯಲ್ಲಿ ವಿಷಯ ತಿಳಿಸುವಂತೆ ಕಂದಾಯ ಅಧಿಕಾರಿಗಳಲ್ಲಿ ಕೋರಿದುರು

ಕಂದಾಯ ಅಧಿಕಾರಿಗಳು ಸದರಿ ವಿಷಯದ ಬಗ್ಗೆ ವಿವರಣೆಯನ್ನು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ವಾರ್ಡ್ ಮಟ್ಟದ ಕಮೀಟಿ ಸದಸ್ಯರಿಂದ ಘನತ್ಯಾಜ್ಯನಿರ್ವಹಣೆಯ ಬಗ್ಗೆ ವಾರ್ಡ್–138ರಲ್ಲಿ ಬ್ಲಾಕ್ ಸ್ಪಾರ್ಟ್‌ಗಳು ಮತ್ತು ಕಸ ವಿಂಗಡನೆ ಮತ್ತು ವಿಲೇವಾರಿಯ ಬಗ್ಗೆ ದೂರುಗಳು ಬಗ್ಗೆ ಸಭೆಯಲ್ಲಿ ವಿವರಣೆ ನೀಡುವಂತೆ ಕೋರಿದರು.

ಕಿರಿಯ ಆರೋಗ್ಯ ಪರಿವೀಕ್ಷಕರು ಸದರಿ ವಿಷಯದ ಬಗ್ಗೆ ವಿವರಣೆ ನೀಡುತ್ತ ಕಸ ವಿಲೇವರಿ ಮಾಡುವ ಕೇಂದ್ರಗಳಲ್ಲಿ ಕೆಲವು ಸಮಸ್ಯಗಳಗಿದ್ದು ಸರಿಪಡಿಸಿ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು : ಪೌರ ಕಾರ್ಮಿಕರ ಮತ್ತು ಆಟೋಗಳ ಹಾಜರಾತಿ ಪುಸ್ತಕವನ್ನು ಪರಿಶೀಲನೆ ಮಾಡಿದರು ಹಾಗೂ ಮುಂದಿನ ಸಭೆಗೆ ಗುತ್ತಿಗೆದಾರರನ್ನು ಕರೆಸುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

ಹಾಜರಿದ್ದ ವಾರ್ಡ್ ಕಮೀಟಿ ಸದಸ್ಯರು

| ಕ್ರಮ ಸಂಖ್ಯೆ | **ವಾರ್ಡ್ ಹಂತದ ಸಮಿತಿ** ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಶ್ರೀ ಕೆ. ಬಿ ತಾರಾನಾಥ್. ಸಹಾಯಕ ಕಾರ್ಯಪಾಲಕ ಅಭಿಯಂತರರು( ಕಾಟನ್ ಪೇಟೆ, ಉಪವಿಭಾಗ)ದೂ.9110223764 | ಅಧ್ಯಕ್ಷರು ಮತ್ತು ವಾರ್ಡ್‌ನ ನೋಡಲ್ ಅಧಿಕಾರಿ | |
| 2 | ಶ್ರೀ ಗಿರಿಧರ್, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 138, ಬಿ.ಬಿ.ಎಂ.ಪಿ, ದೂ. 8618436036 | ಸದಸ್ಯ ಕಾರ್ಯದರ್ಶಿ | |

| | | | |
|---|---|---|---|
| 3 | ಗೀತಾ ಹೆಚ್, ದೂ. 9986537126<br>ಕಿರಿಯ ಆರೋಗ್ಯ ಪರಿವೀಕ್ಷಕರು. ವಾರ್ಡ್ –138 | ಸದಸ್ಯರು | |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ ದೂ. 9342582372 ಶ್ರೀ ಬಾಬು (ಕೆಲಸ ಪರಿವೀಕ್ಷಕರು) | ಸದಸ್ಯರು | |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ ದೂ. 9845563157 | ಸದಸ್ಯರು | |
| 6 | ಶ್ರೀ ಮೊಹಮದ್ ಸಾಧೀಕ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ನಂ. 9945373444 | ಸದಸ್ಯರು | |
| 7 | ಶ್ರೀ ಮುಸ್ತಕ್ ಶರೀಫ್ ದೂ. 9880960040<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ | ಸದಸ್ಯರು | |
| 8 | ಶ್ರೀ ಶಿವಯ್ಯ (ಆರ್.ಐ) 9480685303<br>ಕಂದಾಯ ಪರಿವೀಕ್ಷಕರು | ಸದಸ್ಯರು | |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿ ಗೀತಾ ಹೆಚ್, ದೂ. 9986537126 | ಸದಸ್ಯರು | |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ ( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ ಹನುಮಂತ ರಾಜು 8618556909 | ಸದಸ್ಯರು | |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು .<br>(ಬೇಸ್ಕಂ)ರವರ ಪ್ರತಿನಿಧಿ | ಸದಸ್ಯರು | |

ಸಹಾಯಕ ಇಂಜಿನಿಯರ್ (ವಿ)
ಕಾ & ಪಾ ಘಟಕ–3,
ಬೆ.ವಿ.ಕಂ., ಪಶ್ಚಿಮ 3ನೇ ಉಪ–ವಿಭಾಗ
ಬೆಂಗಳೂರು–5600

**ಕಾರ್ಯದರ್ಶಿಗಳು**
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ: 138
ವಾರ್ಡ್ ಹಂತದ ಸಮೀತಿ

ಅಧ್ಯಕ್ಷರು
**ಹಾಗೂ ನೋಡಲ್ ಅಧಿಕಾರಿ**
**ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 138**

ಪ್ರತಿಯನ್ನು

1. ಜಂಟಿ ಆಯುಕ್ತರು ಪಶ್ಚಿಮ ರವರ ಅವಗಾಹನೆಗೆ ಸಲ್ಲಿಸಿದೆ,
2. ಜಂಟಿ ಆಯುಕ್ತರು (ಹಣಕಾಸು) ರವರ ಅವಗಾಹನೆಗೆ ಸಲ್ಲಿಸಿದೆ,
3. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ,
4. ಕಛೇರಿ ಕಡತಕ್ಕೆ.